# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 101 |
| ವಿಧಾನ ಪರಿಷತ್ತಿನ ಸದಸ್ಯರ ಹೆಸರು | : | ಶ್ರೀ ಮಂಜುನಾಥ್ ಭಂಡಾರಿ<br>(ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | 09.12.2024 |
| ಉತ್ತರಿಸುವ ಸಚಿವರು | : | ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ ಇಲಾಖೆ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ | ರಾಜ್ಯದಲ್ಲಿರುವ ಪಡಿತರ ಚೀಟಿ ಅರ್ಜಿಗಳನ್ನು ಕಾಲಕಾಲಕ್ಕೆ ಪ್ರಮಾಣೀಕೃತ ಮಾನದಂಡಗಳ ಆಧಾರದಲ್ಲಿ ಪರಿಶೀಲನೆ ಮತ್ತು ಪರಿಷ್ಕರಣೆ ಮಾಡದೆ ಸಾವಿರಗಟ್ಟಲೆ ಅರ್ಜಿಗಳು ಬಾಕಿಯಿದ್ದು ನೈಜ ಅರ್ಹ ಪಡಿತರ ಚೀಟಿ ಪಡೆಯಬೇಕಾದವರು ಪಡಿತರದಿಂದ ವಂಚಿತರಾಗಿರುವುದು ಸರ್ಕಾರದ ಗಮನಕ್ಕೆ ಬಂದ ಹಿನ್ನೆಲೆಯಲ್ಲಿ ಅರ್ಜಿ ವಿಲೇವಾರಿಗೆ ಏನು ಕ್ರಮವಹಿಸಲಾಗಿದೆ; (ವಿವರ ನೀಡುವುದು) | ಹೊಸ ಆದ್ಯತಾ ಪಡಿತರ ಚೀಟಿಯನ್ನು ಕೋರಿ ಸೆಪ್ಟಂಬರ್-2023ರ ಮಾಹೆಯವರೆವಿಗೂ ಸಲ್ಲಿಸಿದ್ದ 2,95,986 ಅರ್ಜಿಗಳ ವಿಲೇವಾರಿ ಬಗ್ಗೆ ಸರ್ಕಾರದ ಆದೇಶ ಸಂಖ್ಯೆ: ಆನಾಸ 211 ಡಿಆರ್‌ಎ 2021, ದಿನಾಂಕ: 29.09.2023 ರಂದು ಆದೇಶಿಸಿಲಾಗಿರುತ್ತದೆ. ಈ ಆದೇಶದಂತೆ ಬಾಕಿ ಇರುವ ಹೊಸ ಆದ್ಯತಾ ಪಡಿತರ ಚೀಟಿಗಳನ್ನು ವಿಲೇ ಮಾಡಲು ಕ್ರಮವಹಿಸಲಾಗುತ್ತಿದೆ.<br>ಪ್ರಸ್ತುತ ಆಹಾರ ಇಲಾಖೆಯಲ್ಲಿ ಬಳಸಲಾಗುತ್ತಿರುವ ಸರ್ವರ್ ಹಳೆಯದಾಗಿದ್ದು, ಈ ಕಾರಣದಿಂದಾಗಿ ಎನ್.ಐ.ಸಿ ಯಿಂದ ಕೆ.ಎಸ್.ಡಿ.ಸಿ (Karnataka State Data Centre) ಗೆ ಆಹಾರ ತಂತ್ರಾಂಶದ Migration ಕಾರ್ಯವು ಅಂತಿಮ ಹಂತದಲ್ಲಿದ್ದು, ಎನ್.ಐ.ಸಿ ಯಿಂದ ಕೆ.ಎಸ್.ಡಿ.ಸಿ 'ಗೆ Migration ಕಾರ್ಯ ಪೂರ್ಣಗೊಂಡ ನಂತರ ಆದ್ಯತಾ ಪಡಿತರ ಚೀಟಿ ನೀಡುವ ಕಾರ್ಯ/ ಪಡಿತರ ಚೀಟಿ ತಿದ್ದುಪಡಿ ಮಾಡುವ ಪ್ರಕ್ರಿಯೆ ನಿರಂತರವಾಗಿರುತ್ತದೆ. ಹಾಲಿ ಪಡಿತರ ಚೀಟಿಯಲ್ಲಿನ ಹೆಸರು ಸೇರ್ಪಡೆ/ತಿದ್ದುಪಡಿಗೆ ಪ್ರತಿ ತಿಂಗಳ 1 ರಿಂದ 10 ನೇ ತಾರಿಖೀನವರೆಗೆ ಅವಕಾಶವನ್ನು ನೀಡಲಾಗುತ್ತಿದೆ. ಹಾಗೂ ತುರ್ತು ವೈದ್ಯಕೀಯ ಪರಿಸ್ಥಿತಿ ಇರುವ ಅರ್ಹ ಫಲಾನುಭವಿಗಳಿಗೆ ಹೊಸ ಆದ್ಯತಾ ಪಡಿತರ ಚೀಟಿ ನೀಡಲು ನಿರಂತರವಾಗಿ ಅವಕಾಶವನ್ನು ಕಲ್ಪಿಸಲಾಗಿರುತ್ತದೆ. |

| | | |
|---|---|---|
| ಆ | ಖಚಿತ ಆದಾಯ ಮೂಲ ಹೊಂದಿ ಅದಕ್ಕೆ ಪೂರಕವಾಗಿ ಆರ್ಥಿಕ ವ್ಯವಹಾರ, ತೆರಿಗೆ ಪಾವತಿ, ಸ್ವಂತ ವಾಹನ, ಕೃಷಿ ಮತ್ತು ಇವುಗಳನ್ನು ಸ್ಪಷ್ಟವಾಗಿ ಗುರುತಿಸುವ ಆಧಾರ್, ಪಾನ್, ಪಹಣಿ, ತೆರಿಗೆ ಪಾವತಿ ದಾಖಲೆಗಳು ಬ್ಯಾಂಕ್ ವಹಿವಾಟು ಇತ್ಯಾದಿಗಳ ಲಿಂಕ್ ಮೂಲಕ ಪ್ರಾರಂಭದಲ್ಲೇ ಬಿಪಿಎಲ್ ಪಡಿತರ ಚೀಟಿಯ ವ್ಯಾಪ್ತಿಯಿಂದ ಹೊರಗಿಡಲು ಸರ್ಕಾರ ಪ್ರಸ್ತುತ ಕೈಗೊಳ್ಳಲುದ್ದೇಶಿರುವ ಕ್ರಮಗಳೇನು; (ವಿವರ ನೀಡುವುದು) | ರಾಜ್ಯದಲ್ಲಿ ಆದ್ಯತಾ ಪಡಿತರ ಚೀಟಿಗಳನ್ನು ಪಡೆಯುವ ಬಗ್ಗೆ ಈ ಕೆಳಕಂಡ ಹೊರಗಿಡುವ ಮಾನದಂಡಗಳನ್ನು ರೂಪಿಸಲಾಗಿದೆ.<br>• ವೇತನವನ್ನು ಗಣನೆಗೆ ತೆಗೆದುಕೊಳ್ಳದೆ ಎಲ್ಲಾ ಖಾಯಂ ನೌಕರರು ಅಂದರೆ ಸರ್ಕಾರದ ಅಥವಾ ಸರ್ಕಾರದಿಂದ ಅನುದಾನವನ್ನು ಪಡೆಯುತ್ತಿರುವ ಸಂಸ್ಥೆಗಳು ಅಥವಾ ಸರ್ಕಾರಿ ಪ್ರಾಯೋಜಿತ ಸರ್ಕಾರಿ ಸ್ವಾಮ್ಯದ ಸಂಸ್ಥೆಗಳು/ಮಂಡಳಿಗಳು/ ನಿಗಮಗಳು/ಸ್ವಾಯತ್ತ ಸಂಸ್ಥೆಗಳು ಇತ್ಯಾದಿ ಒಳಗೊಂಡಂತೆ ಆದಾಯ ತೆರಿಗೆ/ಸೇವಾ ತೆರಿಗೆ/ ವ್ಯಾಟ್/ವೃತ್ತಿ ತೆರಿಗೆ ಪಾವತಿಸುವ ಎಲ್ಲಾ ಕುಟುಂಬಗಳು.<br>• ಗ್ರಾಮೀಣ ಪ್ರದೇಶಗಳಲ್ಲಿ 03 ಹೆಕ್ಟರ್ ಒಣಭೂಮಿ ಅಥವಾ ತತ್ಸಮಾನ ನೀರಾವರಿ ಭೂಮಿ ಹೊಂದಿರುವ ಕುಟುಂಬಗಳು ಅಥವಾ ಗ್ರಾಮೀಣ ಪ್ರದೇಶವನ್ನು ಹೊರತುಪಡಿಸಿ ನಗರ ಪ್ರದೇಶಗಳಲ್ಲಿ 1000 ಚದರ ಅಡಿಗಿಂತಲೂ ಹೆಚ್ಚಿನ ವಿಸ್ತೀರ್ಣದ ಪಕ್ಕಾ ಮನೆಯನ್ನು ಸ್ವಂತವಾಗಿ ಹೊಂದಿರುವ ಕುಟುಂಬಗಳು.<br>• ಜೀವನೋಪಾಯಕ್ಕಾಗಿ ಸ್ವತಃ ಓಡಿಸುವ ಒಂದು ವಾಣಿಜ್ಯ ವಾಹನವನ್ನು ಅಂದರೆ ಟ್ರಾಕ್ಟರ್, ಮ್ಯಾಕ್ಸಿಕ್ಯಾಬ್, ಟ್ಯಾಕ್ಸಿ ಇತ್ಯಾದಿಗಳನ್ನು ಹೊಂದಿದ ಕುಟುಂಬವನ್ನು ಹೊರತುಪಡಿಸಿ ನಾಲ್ಕು ಚಕ್ರದ ವಾಹನಗಳನ್ನು ಹೊಂದಿರುವ ಎಲ್ಲಾ ಕುಟುಂಬಗಳು.<br>• ಕುಟುಂಬದ ವಾರ್ಷಿಕ ಆದಾಯವು ರೂ. 1.20 ಲಕ್ಷಗಳಿಗಿಂತಲೂ ಹೆಚ್ಚು ಇರುವ ಕುಟುಂಬಗಳು.<br>ಮೇಲಿನ ಮಾನದಂಡಗಳನ್ವಯ ಕಂದಾಯ ಇಲಾಖೆಯಿಂದ ನೀಡುವ ಆದಾಯ ಪ್ರಮಾಣ ಪತ್ರವನ್ನು ಪರಿಶೀಲಿಸಿ ನಂತರ ಆದ್ಯತಾ ಪಡಿತರ ಚೀಟಿ ನೀಡಲು ಕ್ರಮವಹಿಸಲಾಗುತ್ತಿದೆ. ಆದ್ಯತಾ ಪಡಿತರ ಚೀಟಿ ಹೊಂದಿರುವವರ ಮಾಹಿತಿಯನ್ನು ಕುಟುಂಬ ತಂತ್ರಾಂಶದೊಂದಿಗೆ ಹಂಚಿಕೊಂಡಿದ್ದು, ಕುಟುಂಬ |

| | | |
|---|---|---|
| | | ತಂತ್ರಾಂಶದಿಂದ ಆದಾಯ ತೆರಿಗೆ ಪಾವತಿದಾರರು, ಸರ್ಕಾರಿ ನೌಕರರು, ವಾರ್ಷಿಕ ಆದಾಯ ರೂ. 1.20 ಲಕ್ಷಕ್ಕಿಂತ ಹೆಚ್ಚು ಆದಾಯ ಇರುವವರ ಮಾಹಿತಿಯನ್ನು ಪಡೆಯಲಾಗುತ್ತಿದೆ. |
| ಇ | ಹಲವಾರು ನೈಜ ಬಿಪಿಎಲ್ ಪಡಿತರ ಚೀಟಿಯನ್ನು ಪಡೆಯಬೇಕಾದವರು ಮನೆ ಸಂಖ್ಯೆ, ಆದಾಯ ಮತ್ತು ಜಾತಿ ಪ್ರಮಾಣ ಪತ್ರ, ಇತರ ಪೂರಕ ದಾಖಲೆಗಳ ಅಲಭ್ಯತೆಯ ಹಿನ್ನಲೆಯಲ್ಲಿ ಪಡಿತರ ಚೀಟಿಯಿಂದ ವಂಚಿತರಾಗಿರುವ ಒಟ್ಟು ಕುಟುಂಬಗಳೆಷ್ಟು; ಈ ಕುರಿತು ಸರ್ಕಾರ ಗಮನಕ್ಕೆ ಬಂದ ನಂತರ ಏನು ಕ್ರಮವಹಿಸಲಾಗಿದೆ; | ಇಂತಹ ಯಾವುದೇ ಪ್ರಕರಣಗಳು ಕಂಡು ಬಂದಿರುವುದಿಲ್ಲ. |
| ಈ | ಏಕ ಬಾರಿಗೆ ಆಹಾರ ಇಲಾಖೆಯ ಅರ್ಜಿದಾರರ ಆದಾಯ/ ವ್ಯವಹಾರಕ್ಕೆ ಲಿಂಕ್ ಆಗಿರುವ ವೈಯಕ್ತಿಕ ದಾಖಲೆಗಳನ್ನು ಹೊಂದಿರುವ ಇಲಾಖೆಗಳೊಂದಿಗೆ ಸಮನ್ವಯ ಸಾಧಿಸಿ ಈಗ ಬಾಕಿಯಾಗಿರುವ ಎಲ್ಲಾ ಪಡಿತರ ಚೀಟಿ ಅರ್ಜಿಗಳನ್ನು ಕ್ಷಿಪ್ರವಾಗಿ ವಿಲೇವಾರಿ ಮಾಡುವ ಬಗ್ಗೆ ಸರ್ಕಾರ ಏನು ಕ್ರಮ ಕೈಗೊಂಡಿದೆ? | ಪ್ರಸ್ತುತ ಆಹಾರ ಇಲಾಖೆಯಲ್ಲಿ ಬಳಸಲಾಗುತ್ತಿರುವ ಸರ್ವರ್ ಹಳೆಯದಾಗಿದ್ದು, ಈ ಕಾರಣದಿಂದಾಗಿ ಎನ್.ಐ.ಸಿ ಯಿಂದ ಕೆ.ಎಸ್.ಡಿ.ಸಿ (Karnataka State Data Centre) ಗೆ ಆಹಾರ ತಂತ್ರಾಂಶದ Migration ಕಾರ್ಯವು ಅಂತಿಮ ಹಂತದಲ್ಲಿದ್ದು, ಎನ್.ಐ.ಸಿ ಯಿಂದ ಕೆ.ಎಸ್.ಡಿ.ಸಿ 'ಗೆ Migration ಕಾರ್ಯ ಪೂರ್ಣಗೊಂಡ ನಂತರ ಆದ್ಯತಾ ಪಡಿತರ ಚೀಟಿ ನೀಡುವ ಕಾರ್ಯ/ ಪಡಿತರ ಚೀಟಿ ತಿದ್ದುಪಡಿ ಮಾಡುವ ಪ್ರಕ್ರಿಯೆ ನಿರಂತರವಾಗಿರುತ್ತದೆ. |

ಆನಾಸ 347 ಡಿಆರ್ಎ 2024

(ಕೆ.ಹೆಚ್. ಮುನಿಯಪ್ಪ)

ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ

ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ

ಇಲಾಖಾ ಸಚಿವರು